ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009

ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ : 22 JUL 2021

## ಅಧಿಸೂಚನೆ

ವಿಷಯ: ಕವಿಮಂ ನೌಕರರ ಸೇವಾ ನಿಯಮಾವಳಿಗಳಿಗೆ ತಿದ್ದುಪಡಿ ಬಗ್ಗೆ.
ಉಲ್ಲೇಖ: ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಇ 8(೧) ಸೇನಿಸೇ 2020 ದಿನಾಂಕ: 22.06.2021.

***

ನಿಗಮದಲ್ಲಿ ಕರ್ತವ್ಯವನ್ನು ನಿರ್ವಹಿಸುತ್ತಿರುವ ಕೆಲವು ನೌಕರರು ಕ್ಯಾನ್ಸರ್ ಕಾಯಿಲೆಗೆ ಸಂಬಂಧಿಸಿದಂತೆ ವೈದ್ಯರ ಸಲಹೆಯ ಮೇರೆಗೆ ಕಿಮೋ/ರೇಡಿಯೋ ಥೆರಪಿಯಂತಹ ಚಿಕಿತ್ಸೆಗೆ ಒಳಪಡಬೇಕಿದ್ದು, ಆ ನಿಮಿತ್ತವಾಗಿ ಕಡ್ಡಾಯವಾಗಿ ವಿಶ್ರಾಂತಿಯನ್ನು ಪಡೆಯಬೇಕಿರುವ ಅವಶ್ಯಕತೆಯಿರುತ್ತದೆ. ಈ ನಿಮಿತ್ತವಾಗಿ ಪಡೆಯುವ ಚಿಕಿತ್ಸೆ ಮತ್ತು ವಿಶ್ರಾಂತಿಯ ಅಗತ್ಯತೆಯಿಂದಾಗಿ ಕಚೇರಿಗೆ ಹಾಜರಾಗಲು ಕಷ್ಟ ಸಾಧ್ಯವಾದ್ದರಿಂದ, ಈ ನಿಮಿತ್ತದ ಅವಧಿಯನ್ನು ಸಕ್ಷಮ ವೈದ್ಯಕೀಯ ಪ್ರಾಧಿಕಾರವು ನೀಡುವ ಪ್ರಮಾಣ ಪತ್ರವನ್ನು ಹಾಜರುಪಡಿಸುವ ಷರತ್ತಿಗೊಳಪಟ್ಟು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅನುಬಂಧ-ಬಿ ರಲ್ಲಿ ನಿಯಮ 11(ಜೆ) ಎಂಬ ನಿಯಮವನ್ನು ಹೊಸದಾಗಿ ಸೇರ್ಪಡೆಗೊಳಿಸಿ ಆದೇಶ ಹೊರಡಿಸಲಾಗಿರುತ್ತದೆ.

ಆದ್ದರಿಂದ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಸದರಿ ನಿಬಂಧನೆಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರ ಸೇವಾ ನಿಯಮಗಳಲ್ಲಿ ಈ ಕೆಳಕಂಡಂತೆ ಅಳವಡಿಸಿಕೊಳ್ಳಲು ಇಚ್ಛಿಸುತ್ತದೆ:

1. **<u>ಶೀರ್ಷಿಕೆ ಮತ್ತು ಆರಂಭ:</u>**

ಅ) ಈ ನಿಯಮಗಳನ್ನು ಕವಿಪ್ರನಿನಿ ನೌಕರರ ಸೇವಾ ನಿಯಮಗಳು(ತಿದ್ದುಪಡಿ), 2021 ಎಂದು ಕರೆಯತಕ್ಕದ್ದು.
ಆ) ಈ ತಿದ್ದುಪಡಿಯು, ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

2. **<u>ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರ ಸೇವಾ ನಿಯಮಗಳ ಅಪೆಂಡಿಕ್ಸ್-8, ಭಾಗ-1 ರ ಅಡಿಯಲ್ಲಿ ಹೊಸದಾಗಿ ಸೇರ್ಪಡೆ:</u>**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ನೌಕರರ ಸೇವಾ ನಿಯಮಗಳ ಅಪೆಂಡಿಕ್ಸ್-8, ಭಾಗ-1 ರ ಅಡಿಯಲ್ಲಿ ಕ್ರಮ ಸಂಖ್ಯೆ: 10(ಎಫ್) ರ ನಂತರ ಕ್ರಮ ಸಂಖ್ಯೆ: 10(ಜಿ) ನ್ನು ಈ ಕೆಳಕಂಡಂತೆ ಹೊಸದಾಗಿ ಸೇರ್ಪಡೆ ಮಾಡಿಕೊಳ್ಳಲಾಗಿದೆ:

"**10-ಜಿ:** ಕ್ಯಾನ್ಸರ್ ಕಾಯಿಲೆಯಿಂದ ಬಳಲುತ್ತಿದ್ದು ಚಿಕಿತ್ಸಾ ತಜ್ಞರು ರೂಪಿಸುವ ಯೋಜನೆಯನುಸಾರ ಪಡೆಯುವ ಕಿಮೋ/ರೇಡಿಯೋ ಥೆರಪಿ ಚಿಕಿತ್ಸೆ ಮತ್ತು ಸಂಬಂಧದಲ್ಲಿ ಅಗತ್ಯವಾಗುವ ವಿಶ್ರಾಂತಿಯ ಅವಧಿಯ ದಿನಗಳಿಗೆ ಸಕ್ಷಮ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದು ಒದಗಿಸುವ ಷರತ್ತಿಗೊಳಪಟ್ಟು, ಈ ಚಿಕಿತ್ಸೆಯ ಅವಧಿಯಲ್ಲಿ ಮಾತ್ರ ಗರಿಷ್ಠ ಆರು ತಿಂಗಳುಗಳ ಮಿತಿಗೊಳಪಟ್ಟು ವಿಶೇಷ ಸಾಂದರ್ಭಿಕ ರಜೆಯನ್ನು ಅನುಮತಿಸತಕ್ಕದ್ದು."

ಆದೇಶದ ಮೇರೆಗೆ,

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/21-22/ cys-693 ದಿನಾಂಕ: 18 AUG 2021

ನಿಗಮದಲ್ಲಿ ಕರ್ತವ್ಯವನ್ನು ನಿರ್ವಹಿಸುತ್ತಿರುವ ಕೆಲವು ನೌಕರರು ಕ್ಯಾನ್ಸರ್ ಕಾಯಿಲೆಗೆ ಸಂಬಂಧಿಸಿದಂತೆ ವೈದ್ಯರ ಸಲಹೆಯ ಮೇರೆಗೆ ಕಿಮೋ/ರೇಡಿಯೋ ಥೆರಪಿಯಂತಹ ಚಿಕಿತ್ಸೆಗೆ ಒಳಪಡಬೇಕಿದ್ದು, ಆ ನಿಮಿತ್ತವಾಗಿ ಕಡ್ಡಾಯವಾಗಿ ವಿಶ್ರಾಂತಿಯನ್ನು ಪಡೆಯ ಬೇಕಿರುವ ಅವಶ್ಯಕತೆಯಿರುತ್ತದೆ. ಈ ನಿಮಿತ್ತವಾಗಿ ಪಡೆಯುವ ಚಿಕಿತ್ಸೆ ಮತ್ತು ವಿಶ್ರಾಂತಿಯ ಅಗತ್ಯತೆಯಿಂದಾಗಿ ಕಛೇರಿಗೆ ಹಾಜರಾಗಲು ಕಷ್ಟ ಸಾಧ್ಯವಾದ್ದರಿಂದ, ಈ ನಿಮಿತ್ತದ ಅವಧಿಯನ್ನು ಸಕ್ಷಮ ವೈದ್ಯಕೀಯ ಪ್ರಾಧಿಕಾರವು ನೀಡುವ ಪ್ರಮಾಣ ಪತ್ರವನ್ನು ಹಾಜರುಪಡಿಸುವ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಕುರಿತು ನಿರ್ದೇಶಕರು(ಆ ಮತ್ತು ಮಾ.ಸಂ.), ಕವಿಪ್ರನಿನಿ., ಬೆಂಗಳೂರುರವರು ಹೊರಡಿಸಿರುವ ಅಧಿಸೂಚನೆ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/5411/96-97 ದಿನಾಂಕ:05.07.2021ರ ಅಧಿಸೂಚನೆಯನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.